# ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 360 |
| 2 | ಸದಸ್ಯರ ಹೆಸರು | : | ಶ್ರೀ ಕೆ. ಹರೀಶ್ ಕುಮಾರ್<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| 3 | ಉತ್ತರಿಸುವ ದಿನಾಂಕ | : | 16-02-2023 |
| 4 | ಉತ್ತರಿಸುವವರು | : | ಮುಖ್ಯಮಂತ್ರಿಗಳು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬೆಂಗಳೂರು ನಗರ ವ್ಯಾಪ್ತಿಯಲ್ಲಿ ರಸ್ತೆಗಳನ್ನು ಅಗೆದು ಹಾಗೆಯೇ ಬಿಟ್ಟಿರುವುದರಿಂದ ರಸ್ತೆ ಅಪಘಾತಗಳು ಸಾವು-ನೋವುಗಳು ಸಂಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬೆಂಗಳೂರು ನಗರ ವ್ಯಾಪ್ತಿಯಲ್ಲಿ ರಸ್ತೆಗಳನ್ನು ಅಗೆದು ಹಾಗೆಯೇ ಬಿಟ್ಟಿರುವುದರಿಂದ ರಸ್ತೆ ಅಪಘಾತಗಳು, ಸಾವು-ನೋವುಗಳು ಸಂಭವಿಸುತ್ತಿದ್ದ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿದ್ದು, ಇಂತಹ ಪ್ರಕರಣಗಳನ್ನು ಸರ್ಕಾರವು ಗಂಭೀರವಾಗಿ ಪರಿಗಣಿಸಿರುತ್ತದೆ. |
| ಆ) | ರಸ್ತೆಗಳನ್ನು ಅಗೆದು ತಿಂಗಳುಗಳ ಕಾಲ ಮುಂಜಾಗ್ರತಾ ಕ್ರಮಗಳಿಲ್ಲದೇ ಮುಚ್ಚದಿರುವ ಕುರಿತಾಗಿ ಸರ್ಕಾರ ಕೈಗೊಂಡ ಕ್ರಮಗಳೇನು; | ರಸ್ತೆಗಳನ್ನು ಅಗೆದು ತಿಂಗಳುಗಳ ಕಾಲ ಹಾಗೆಯೇ ಬಿಡುವುದನ್ನು ತಪ್ಪಿಸಲು, ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ನಡೆಯುವ ಸಭೆಯಲ್ಲಿ ಬೆಂಗಳೂರು ನಗರದ ರಸ್ತೆ ಅಗೆತ ಮಾಡುವ ಇಲಾಖೆಗಳಾದ ಬೆಸ್ಕಾಂ, ಗೇಲ್, ಬಿಡಬ್ಲ್ಯೂಎಸ್‌ಎಸ್‌ಬಿ, ಬಿಎಸ್‌ಎನ್‌ಎಲ್ ಸಂಸ್ಥೆಗಳೊಂದಿಗೆ ಚರ್ಚಿಸಿ, ರಸ್ತೆಯನ್ನು ಅಗೆಯುವ ಸಂಸ್ಥೆಗಳೇ ರಸ್ತೆಯನ್ನು ದುರಸ್ಥಿ ಪಡಿಸುವ ನಿರ್ಣಯವನ್ನು ಕೈಗೊಳ್ಳಲಾಗಿರುತ್ತದೆ. ಈ ನಿರ್ಣಯದಂತೆ, ಸದರಿ ಸಂಸ್ಥೆಗಳು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ರಸ್ತೆ ಅಗೆತ ಪುನರ್ ನಿರ್ಮಾಣದ ಹಣವನ್ನು ತುಂಬುವ ಬದಲಾಗಿ, ಆಯಾ ಸಂಸ್ಥೆಗಳು ರಸ್ತೆ ಪುನರ್ ನಿರ್ಮಾಣ ಕಾಮಗಾರಿಯನ್ನು ಕೈಗೆತ್ತಿಕೊಳ್ಳುತ್ತಿವೆ. |
| ಇ) | ಇಂತಹ ಪ್ರಕರಣಗಳಲ್ಲಿ ಸಾವು ನೋವು ಸಂಭವಿಸಿದಾಗ ಸರ್ಕಾರ (ಬಿಬಿಎಂಪಿ) ಪರಿಹಾರ ನೀಡಿದೆಯೇ? (ಮಾಹಿತಿ ಒದಗಿಸುವುದು) | ಈ ಕುರಿತಾಗಿ ದಾಖಲಾಗಿರುವ ಇಂತಹ ಪ್ರಕರಣಗಳಲ್ಲಿ ಪೊಲೀಸ್ ಇಲಾಖೆಯು ತನಿಖೆ ನಡೆಸುತ್ತಿದೆ. |

ಸಂಖ್ಯೆ: ನಅಇ 94 ಎಂಎನ್‌ವೈ 2023 (ಇ)

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ